PW-01

ಮಧ್ಯಂತರ ಅರ್ಜಿ ಆದೇಶದ ಮೇರೆಗೆ ಸಾಕ್ಷಿಯನ್ನು ಇಂದು ದಿ.10-04-2023 ರಂದು ಕರೆಯಿಸಿ, ಪ್ರಮಾಣ ವಚನ ಮಾಡಿಸಿ, ಮುಂದುವರೆದ ಪಾಟೀಸವಾಲಿಗೆ ಒಳಪಡಿಸಲಾಯಿತು.

ಮುಂದುವರೆದ ಪಾಟೀಸವಾಲು:- ಪ್ರತಿವಾದಿ ಪರ ವಕೀಲರಿಂದ.

ಪ್ರತಿವಾದಿ 2 ಮತ್ತು 3 ರವರು ಈಗ ಎಲ್ಲಿ ವಾಸವಾಗಿದ್ದಾರೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ನನ್ನ ದಾವಾ ಪತ್ರದಲ್ಲಿ 2 ಮತ್ತು 3 ನೇ ಪ್ರತಿವಾದಿಗಳು ತರಿಕೆರೆ ಟೌನ್ ನಲ್ಲಿ ವಾಸವಾಗಿದ್ದಾರೆ ಎಂದು ನಮೂದಿದ್ದೇನೆ ಎಂದರೆ ಸರಿ. ದಾವಾ ಆಸ್ತಿಗಳು ಮತ್ತು ನಿಪಿ.10 ರಲ್ಲಿ ನಮೂದಿಸಿರುವ ಆಸ್ತಿಗಳನ್ನು ನನ್ನ ಸಹೋದರರು ಮಾರಾಟ ಮಾಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ನಿಪಿ.3 ರಲ್ಲಿ ನಮೂದಿರುವ ಖರೀದಿದಾರರನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಲು ನಿಮಗೆ ಏನಾದರೂ ತೊಂದರೆ ಇದೆಯೇ ಎನ್ನುವ ಪ್ರಶ್ನೆಗೆ ಸಾಕ್ಷಿಯು - ನನಗೆ ಅವರ ಬಗ್ಗೆ ಮಾಹಿತಿ ಇಲ್ಲ , ಆದ ಕಾರಣ ಅವರನ್ನು ಪಕ್ಷಗಾರರನ್ನಾಗಿ ಮಾಡಿಲ್ಲ ಎಂದು ನುಡಿಯತ್ತಾರೆ. ನಿಪಿ.3 ದಾಖಲೆಯನ್ನು ನಾನೇ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೇನೆ ಎಂದರೆ ಸರಿ. ನಿಪಿ.3 ರಲ್ಲಿ ನಮೂದಿರುವ ಖರೀದಿದಾರರ ಬಗ್ಗೆ ನನಗೆ ಮಾಹಿತಿ ಇದ್ದರೂ ಸಹ, ಉದ್ದೆಶಪೂರ್ವಕವಾಗಿ ಅವರನ್ನು ಪಕ್ಷಗಾರರನ್ನಾಗಿ ಮಾಡಿಲ್ಲ ಎಂದರೆ ಸರಿಯಲ್ಲ.

ನಿಪಿ.7 ನ್ನು ನಾನು ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ನಿಪಿ.7 ನಾನು ಸೃಷ್ಟಿ ಮಾತಿಡಿಕೊಂಡಿರುವ ದಾಖಲೆಯಲ್ಲಿ ಸರ್ವೆ ನಂ.60 ಮತ್ತು ಅದಕ್ಕೆ ಸಂಬಂಧಪಟ್ಟಂತೆ ನಮ್ಮ ಮನೆತನದ ನಮ್ಮ ಕುಟುಂಬದ ಯಾವುದೇ ಸದಸ್ಯರ ಹೆಸರಿನಲ್ಲಾಗಲಿ ಅಥವಾ ನಮ್ಮ ಕುಟುಂಬದ ಪೂರ್ವಜನರ ಹೆಸರಿನಲ್ಲಿರುವ ಬಗ್ಗೆ ಯಾವುದಾದರೂ ದಾಖಲೆಗಳನ್ನು ಹಾಜರುಪಡಿಸಿದ್ದೀರಾ ಎಂದರೆ ಸಾಕ್ಷಿಯು - ಸರ್ವೆ ನಂ.60 ಆಸ್ತಿಯು ನನ್ನ ಅಜ್ಜನ ಹೆಸರಿನಲ್ಲಿರುವ ಬಗ್ಗೆ ಮರಣ ಶಾಸನ ಇದೆ, ಅದನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೇನೆ ಎಂದು ನುಡಿಯತ್ತಾರೆ. ಸರ್ವೆ ನಂ.60 ಆಸ್ತಿಯು ನನ್ನ ಅಜ್ಜನ ಹೆಸರಿನಲ್ಲಿರುವ ಬಗ್ಗೆ ನ್ಯಾಯಾಲಯಕ್ಕೆ ಪಹಣಿ ಮತ್ತು ಮ್ಯುಟೇಶನ್ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೇನೆ. ದಾವಾ ಆಸ್ತಿಗಳು ನಮ್ಮ ಅಜ್ಜನ ಹೆಸರಿನಲ್ಲಿರುವ ಬಗ್ಗೆ ಪಹಣಿ ಮತ್ತು ಮ್ಯುಟೇಶನ್ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ.

ದಾವಾ ಸ್ವತ್ತುಗಳನ್ನು 2 ಮತ್ತು 3 ನೇ ಪ್ರತಿವಾದಿಗಳು 1 ನೇ ಪ್ರತಿವಾದಿಗೆ ಮಾರಾಟ ಮಾಡಿದ್ದಾರೆ ಎಂದರೆ ಸರಿಯಲ್ಲ. 1998 ರಲ್ಲಿ ದಾವಾ ಆಸ್ತಿಗಳನ್ನು 1 ನೇ ಪ್ರತಿವಾದಿ ಕ್ರಯಕ್ಕೆ

ಪಡೆದ ನಂತರ ಅವರ ಹೆಸರಿಗೆ ಖಾತೆ , ಪಹಣಿ ಬಂದಿವೆ ಎಂದರೆ ನನಗೆ ಗೊತ್ತಿಲ್ಲ. 1998 ರಿಂದ ಇಂದಿನವರೆಗೆ ದಾವಾ ಆ್ತಗಳ ಸ್ವಾಧಿನವನ್ನು 1 ನೇ ಪ್ರತಿವಾದಿ ಹೊಂದಿದ್ದಾರೆ ಎಂದರೆ ಸರಿಯಲ್ಲ.

ದಾವೆಯಲ್ಲಾಗಲಿ ಮತ್ತು ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರದಲ್ಲಿ ದಾವಾ ಸತ್ತುಗಳು ನಮ್ಮ ಪೂರ್ವಜರಿಗೆ ಹೇಗೆ ಬಂತು ಎಂಬ ಬಗ್ಗೆ ನಮೂದು ಮಾಡಿಲ್ಲ ಎಂದರೆ ಸರಿಯಲ್ಲ. ನಿಪಿ.7 ರಲ್ಲಿ ಸರ್ವೆ ನಂ.60 ರ ಬಗ್ಗೆ ಮಾತ್ರ ಹೇಳಿದ್ದು ಉಳಿದ ದಾವಾ ಸತ್ತುಗಳ ಬಗ್ಗೆ ಏನನ್ನು ಹೇಳಿಲ್ಲ ಎಂದರೆ ಸಾಕ್ಷಿಯು - ಇಲ್ಲ , ದಾವಾ ಆಸ್ತಿಗಳ ಬಗ್ಗೆ ನಮೂದಾಗಿದೆ ಎಂದು ನುಡಿಯತ್ತಾರೆ.

1 ನೇ ಪ್ರತಿವಾದಿ ದಾವಾ ಆಸ್ತಿಗಳನ್ನು ಕ್ರಯಕ್ಕೆ ಪಡೆದಿದ್ದರಿಂದ ದಾವಾ ಆಸ್ತಿಗಳ ಮೇಲೆ ನನಗೆ ಯಾವುದೇ ಹಕ್ಕು , ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿ ಎಲ್ಲಿದೆ ಎನ್ನುವುದು ನನಗೆ ಗೊತ್ತಿಲ್ಲದಿದ್ದರೂ ಸಹ 1 ನೇ ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆಯನ್ನು ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಪತ್ರದಲ್ಲಿ ಮತ್ತು ನನ್ನ ಮುಖ್ಯ ವಿಚಾರಣೆಯಲ್ಲಿ ನಮೂದಾಗಿರುವ ಎಲ್ಲಾ ಅಂಶಗಳು ಸುಳ್ಳಿನಿಂದ ಕೂಡಿದೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ - ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹೊನ್ನಾಳಿ.